**ಕರ್ನಾಟಕ ಸರ್ಕಾರ**

ಸಂಖ್ಯೆ: ಸಿಆಸುಇ(ಆಸು) 21 ಕತವ 2022

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:14.03.2022

**ಸುತ್ತೋಲೆ**

ವಿಷಯ: ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳಲ್ಲಿ ನಗದು ಘೋಷಣಾ ವಹಿಯನ್ನು ನಿರ್ವಹಿಸುವ ಬಗ್ಗೆ.

ಉಲ್ಲೇಖ: ಸುತೋಲೆ ಸಂಖ್ಯೆ: ಸಿಆಸುಇ (ಆಸು) 21 ಕತವ 2022, ದಿನಾಂಕ: 04.02.2022.

*****

ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯವು ರಿಟ್ ಪಿಟಿಷನ್ ಸಂಖ್ಯೆ: 79/2021 (GM-KLA) ರಲ್ಲಿ ದಿನಾಂಕ: 10.11.2021 ರಂದು ನೀಡಿರುವ ಆದೇಶದನ್ವಯ, ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳು /ಮಂಡಳಿಗಳು /ನಿಗಮಗಳು ಕಾರ್ಯ ವಿಧಾನವನ್ನು ಅನುಸರಿಸುವಂತೆ ಹಾಗೂ ದಿನಾಂಕ: 04.02.2022ರ ಸುತ್ತೋಲೆಗೆ ಲಗತ್ತಿಸಲಾದ ನಮೂನೆಯಲ್ಲಿ ನಗದು ಘೋಷಣೆ ವಹಿಯನ್ನು ನಿರ್ವಹಣೆ ಮಾಡುವಂತೆ ನಿರ್ದೇಶಿಸಲಾಗಿರುತ್ತದೆ. ಸದರಿ ಸುತ್ತೋಲೆಯೊಂದಿಗೆ ಲಗತ್ತಿಸಲಾದ ನಮೂನೆಯನ್ನು ಪರಿಷ್ಕರಿಸಿದ್ದು, ಈ ಕೆಳಕಂಡಂತೆ ನಗದು ಘೋಷಣಾ ವಹಿಯನ್ನು ನಿರ್ವಹಣೆ ಮಾಡುವಂತೆ ಸೂಚಿಸಲಾಗಿದೆ.

**ನಗದು ಘೋಷಣೆ ವಹಿ**

ಮಾಹೆ: ವರ್ಷ:

| ಕ್ರ. ಸಂ. | ಪದನಾಮ ಮತ್ತು ಹುದ್ದೆ | ಕಛೇರಿಗೆ ಆಗಮಿಸಿದ ಸಮಯ | ಮೊತ್ತ | ಕಛೇರಿಯಿಂದ ನಿರ್ಗಮಿಸಿದ ಸಮಯ | ಮೊತ್ತ | ಸಿಬ್ಬಂದಿ/ ಅಧಿಕಾರಿ ಸಹಿ | ಪರಿಶೀಲಿಸುವ ಅಧಿಕಾರಿಯ ಸಹಿ |
|---|---|---|---|---|---|---|---|
| | | | | | | | |

( ಕೆ. ವೆಂಕಟೇಶಪ್ಪ )
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಆಡಳಿತ ಸುಧಾರಣೆ-ತಪಾಸಣೆ)

14/3/22

ಇವರಿಗೆ,

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು / ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು
2. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು

3. ಮಾನ್ಯ ಅಡ್ವೊಕೇಟ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
4. ಎಲ್ಲಾ ಪ್ರಾದೇಶಿಕ ಆಯುಕ್ತರುಗಳು/ಜಿಲ್ಲಾಧಿಕಾರಿಗಳು/ ಜಿಲ್ಲಾ ಪಂಚಾಯತ್ ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
5. ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ನ್ಯಾಯ ದೇಗುಲ, 1ನೇ ಮಹಡಿ, ಸಿದ್ದಯ್ಯರಸ್ತೆ, ಬೆಂಗಳೂರು-27.
6. ಎಲ್ಲಾ ಇಲಾಖಾ ಮುಖ್ಯಸ್ಥರುಗಳು, ಕರ್ನಾಟಕ ಸರ್ಕಾರ.
7. ಮಾನ್ಯ ಕಾನೂನು ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
9. ಸರ್ಕಾರದ ಜಂಟಿ ಕಾರ್ಯದರ್ಶಿ, ಕಾನೂನು ಇಲಾಖೆ (ಆಡಳಿತ-1) ವಿಧಾನಸೌಧ, ಬೆಂಗಳೂರು
10. ಶಾಖಾ ರಕ್ಷಾ ಕಡತ

**ಪ್ರತಿ:**

ರಿಜಿಸ್ಟ್ರಾರ್ ಜನರಲ್, ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಮಾಹಿತಿಗಾಗಿ/ಸೂಕ್ತ ಕ್ರಮಕ್ಕಾಗಿ.

**ಕರ್ನಾಟಕ ಸರ್ಕಾರ**

ಸಂಖ್ಯೆ: ಸಿಆಸುಇ (ಆಸು) 21 ಕತವ 2022

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ: 04.02.2022

**ಸುತ್ತೋಲೆ**

ವಿಷಯ: ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳಲ್ಲಿ ನಗದು ಘೋಷಣೆ ವಹಿಯನ್ನು ನಿರ್ವಹಿಸುವ ಬಗ್ಗೆ.

* * * * *

ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯವು ರಿಟ್ ಪಿಟಿಷನ್ ಸಂಖ್ಯೆ: 79/2021(GM-KLA) ರಲ್ಲಿ ದಿನಾಂಕ 10.11.2021 ರಂದು ನೀಡಿರುವ ನಿರ್ದೇಶನದನ್ವಯ, ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳು/ ಮಂಡಳಿಗಳು/ ನಿಗಮಗಳು ಈ ಕೆಳಗಿನ ಕಾರ್ಯ ವಿಧಾನವನ್ನು ಅನುಸರಿಸಿ, ಈ ಸುತ್ತೋಲೆಗೆ ಲಗತ್ತಿಸಲಾದ ನಿಗದಿತ ನಮೂನೆಯಲ್ಲಿ "ನಗದು ಘೋಷಣೆ ವಹಿ"ಯನ್ನು ನಿರ್ವಹಣೆ ಮಾಡುವಂತೆ ನಿರ್ದೇಶಿಸಲಾಗಿದೆ:

"ಕರ್ನಾಟಕ ರಾಜ್ಯದ ಎಲ್ಲಾ ಸರ್ಕಾರಿ ಕಚೇರಿಗಳು/ಮಂಡಳಿಗಳು/ನಿಗಮ ಇತ್ಯಾದಿ ಕಚೇರಿಗಳಲ್ಲಿ ಪಾರದರ್ಶಕತೆಯನ್ನು ತರಲು, ತಕ್ಷಣದಿಂದ ಜಾರಿಗೆ ಬರುವಂತೆ ಈ ಕೆಳಗಿನ ಸೂಚನೆಗಳನ್ನು ಪಾಲಿಸುವುದು:-

1. ಸರ್ಕಾರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪ್ರತಿಯೊಬ್ಬ ನೌಕರರ ವೈಯಕ್ತಿಕ ನಗದನ್ನು ಗಮನಿಸಲು ಪ್ರತಿ ಕೆಲಸದ ದಿನದ ಪ್ರಾರಂಭದಲ್ಲಿ "ನಗದು ಘೋಷಣೆ ವಹಿ"ಯನ್ನು ತೆರೆಯತಕ್ಕದ್ದು.

2. ಸರ್ಕಾರಿ ನೌಕರರು ಅಧಿಕೃತ ಸಹಿ ಹಾಜರಾತಿ ವಹಿ/ಎಎಂಎಸ್ ನಲ್ಲಿ ಕೆಲಸದ ದಿನದಂದು ಕರ್ತವ್ಯಕ್ಕೆ ವರದಿ ಮಾಡಿದ ತಕ್ಷಣ, ಅವನು/ಅವಳು ಕಚೇರಿಗೆ ತಂದ ನಗದು ಮೊತ್ತವನ್ನು ನಗದು ಘೋಷಣೆ ವಹಿಯಲ್ಲಿ ತನ್ನ ಸಹಿಯೊಂದಿಗೆ ಘೋಷಿಸತಕ್ಕದ್ದು.

3. ನಗದು ಘೋಷಣೆ ವಹಿಯು ಸಂಬಂಧಪಟ್ಟ ವಿಭಾಗ/ಶಾಖೆಯ ಗ್ರೂಪ್-ಬಿ ಅಧಿಕಾರಿಯ ವಶದಲ್ಲಿರತಕ್ಕದ್ದು ಮತ್ತು ಸದರಿ ಅಧಿಕಾರಿಯು ನೌಕರರು ಮಾಡಿದ ನಮೂದುಗಳ ಸತ್ಯಾಸತ್ಯತೆಯನ್ನು ಪರಿಶೀಲಿಸುವ ಅಧಿಕಾರವನ್ನು ಹೊಂದಿರುತ್ತಾರೆ.

4. ಯಾವುದೇ ನೌಕರರು ನಗದು ಘೋಷಣೆ ವಹಿಯಲ್ಲಿ ಘೋಷಿಸಿದ್ದಕ್ಕಿಂತ ಹೆಚ್ಚಿನ ಹಣವನ್ನು ಹೊಂದಿರುವುದು ಕಂಡು ಬಂದರೆ, ಅಂತಹ ಹೆಚ್ಚುವರಿ ಹಣವನ್ನು ಅಕ್ರಮ ಸಂಪಾದನೆ ಎಂದು ಅರ್ಥೈಸಲಾಗುತ್ತದೆ. ಹಾಗೂ ಅಂತಹ ಹೆಚ್ಚುವರಿ ಹಣವನ್ನು ಸಕ್ರಮ ಹಣ ಎಂದು ಸಾಬೀತುಪಡಿಸುವುದು ನೌಕರರ ಹೊಣೆಯಾಗಿರುತ್ತದೆ.

5. ನಗದು ಘೋಷಣೆ ವಹಿಯನ್ನು ಕಚೇರಿ ವೇಳೆಯ ಎಲ್ಲಾ ಸಮಯದಲ್ಲಿ, ಯಾವುದೇ ಉನ್ನತ/ಸಕ್ಷಮ ಪ್ರಾಧಿಕಾರ/ಘಟಕದ ಮುಖ್ಯಸ್ಥರು/ ವಿಭಾಗದ ಮುಖ್ಯಸ್ಥರ ತಪಾಸಣೆಗಾಗಿ ತೆರೆದಿರತಕ್ಕದ್ದು.

ಮೇಲಿನ ಎಲ್ಲಾ ಸೂಚನೆಗಳನ್ನು ಕಟ್ಟುನಿಟ್ಟಾಗಿ ಅನುಸರಿಸತಕ್ಕದ್ದು ಹಾಗೂ ಈ ಬಗ್ಗೆ ಯಾವುದೇ ಲೋಪವನ್ನು ಗಂಭೀರವಾಗಿ ಪರಿಗಣಿಸಲಾಗುವುದು.

(ಪಿ. ರವಿಕುಮಾರ್)
ಸರ್ಕಾರದ ಮುಖ್ಯ ಕಾರ್ಯದರ್ಶಿ

**ಇವರಿಗೆ:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು/ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
2. ಮಾನ್ಯ ಮುಖ್ಯ ಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
3. ಮಾನ್ಯ ಅಡ್ವೊಕೇಟ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
4. ಎಲ್ಲಾ ಪ್ರಾದೇಶಿಕ ಆಯುಕ್ತರುಗಳು/ ಜಿಲ್ಲಾಧಿಕಾರಿಗಳು.
5. ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ನ್ಯಾಯ ದೇಗುಲ, 1ನೇ ಮಹಡಿ, ಸಿದ್ದಯ್ಯ ರಸ್ತೆ, ಬೆಂಗಳೂರು-27.
6. ಎಲ್ಲಾ ಇಲಾಖಾ ಮುಖ್ಯಸ್ಥರುಗಳು, ಕರ್ನಾಟಕ ಸರ್ಕಾರ
7. ಮಾನ್ಯ ಕಾನೂನು ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
8. ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
9. ಸರ್ಕಾರದ ಜಂಟಿ ಕಾರ್ಯದರ್ಶಿ, ಕಾನೂನು ಇಲಾಖೆ (ಆಡಳಿತ-1), ವಿಧಾನ ಸೌಧ, ಬೆಂಗಳೂರು.
10. ಶಾಖಾ ರಕ್ಷಾ ಕಡತ

**ಪ್ರತಿ:**

ರಿಜಿಸ್ಟ್ರಾರ್ ಜನರಲ್, ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು – ಮಾಹಿತಿಗಾಗಿ/ ಸೂಕ್ತ ಕ್ರಮಕ್ಕಾಗಿ.

# ನಗದು ಘೋಷಣೆ ವಹಿ

ಮಾಹೆ: ವರ್ಷ:

| ಕ್ರ. ಸಂ. | ಅಧಿಕಾರಿ/ ಸಿಬ್ಬಂದಿಗಳ ಹೆಸರು | | 1 | 2 | 3 | 4 | 5 | 6 | 7 | 8 | 9 | 10 | 11 | 12 | 13 | 14 | 15 | 16 | 17 | 18 | 19 | 20 | 21 | 22 | 23 | 24 | 25 | 26 | 27 | 28 | 29 | 30 | 31 |
|---|---|---|---|---|---|---|---|---|---|---|---|---|---|---|---|---|---|---|---|---|---|---|---|---|---|---|---|---|---|---|---|---|---|
| 1 | | ಮೊತ್ತ | | | | | | | | | | | | | | | | | | | | | | | | | | | | | | | |
| | | ಸಹಿ | | | | | | | | | | | | | | | | | | | | | | | | | | | | | | | |
| 2 | | ಮೊತ್ತ | | | | | | | | | | | | | | | | | | | | | | | | | | | | | | | |
| | | ಸಹಿ | | | | | | | | | | | | | | | | | | | | | | | | | | | | | | | |